## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2011-2012ರ ಸಾಲಿನ ಎರಡು ವರ್ಷಗಳ ಬ್ಲಾಕ್ ಅವಧಿಗೆ ಗಳಿಕೆ ರಜೆಯನ್ನು ಅಧ್ಯರ್ಪಿಸಿ ನಗದೀಕರಣ ಸೌಲಭ್ಯವನ್ನು ನಿಯತಗೊಳಿಸುವ ಬಗ್ಗೆ.

****

ಪ್ರಸ್ತಾವನೆ:

ದಿನಾಂಕ 01.01.2011ರಿಂದ ದಿ:31.12.2012ರವರೆಗಿನ ಎರಡು ವರ್ಷಗಳ ಬ್ಲಾಕ್ ಅವಧಿಗೆ ಗಳಿಕೆ ರಜೆಯನ್ನು ಅಧ್ಯರ್ಪಿಸಿ ನಗದೀಕರಣ ಸೌಲಭ್ಯ ಪಡೆಯುವುದನ್ನು ನಿಯತಗೊಳಿಸುವುದು ಅವಶ್ಯಕವೆಂದು ಸರ್ಕಾರವು ಈ ಬಗ್ಗೆ ಪರಿಶೀಲಿಸಿ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 5 ಸೇನಿಸೇ 2010**
**ಬೆಂಗಳೂರು, ದಿನಾಂಕ: 13.12.2010.**

2011-12ರ ಎರಡು ವರ್ಷಗಳ ಬ್ಲಾಕ್ ಅವಧಿಗೆ ಗಳಿಕೆ ರಜೆಯನ್ನು ಅಧ್ಯರ್ಪಣ ಮಾಡಿ ನಗದೀಕರಣ ಸೌಲಭ್ಯ ಪಡೆಯುವ ಯೋಜನೆಯನ್ನು ದಿ:01.05.2011ರಿಂದ ಜಾರಿಗೊಳಿಸಿ ಈ ಕೆಳಕಂಡಂತೆ ನಿಯತಗೊಳಿಸಲಾಗಿದೆ.

2. 2011-2012ರ ಎರಡು ವರ್ಷಗಳ ಬ್ಲಾಕ್ ಅವಧಿಗೆ ತಮ್ಮ ಗಳಿಕೆಯ ರಜೆಯನ್ನು ಅಧ್ಯರ್ಪಿಸಿ ಅದಕ್ಕೆ ಬದಲಾಗಿ ನಗದನ್ನು ಪಡೆಯಲಿಚ್ಛಿಸುವ ಈ ಕೆಳಕಂಡ ವೇತನ ಶ್ರೇಣಿಗಳಲ್ಲಿ ವೇತನ ಪಡೆಯುತ್ತಿರುವ ನೌಕರರು, ಅವರು ಅರ್ಜಿ ಸಲ್ಲಿಸಿದ ದಿನಾಂಕದಿಂದ ಒಂದು ತಿಂಗಳ ತರುವಾಯ ಅಥವಾ ಅವರ ವೇತನ ಶ್ರೇಣಿಯ ಮುಂದೆ ಸೂಚಿಸಿರುವ ಅವಧಿ ಯಾವುದೋ ನಂತರ ಬರುವುದೋ ಆ ತಿಂಗಳಲ್ಲಿ ನಗದೀಕರಣ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ.

| ಕ್ರಮ ಸಂಖ್ಯೆ | ವೇತನ ಶ್ರೇಣಿ ರೂ. | ಮುಂಚಿತವಾಗಿ ಒಂದು ತಿಂಗಳ ನೋಟಿಸ್ ನೀಡಿ 2011-2012ರ ಬ್ಲಾಕ್ ಅವಧಿಗೆ ನಗದೀಕರಣ ಸೌಲಭ್ಯ ಪಡೆಯುವ ಅವಧಿ |
|---|---|---|
| 1 | 4800-7275ರಿಂದ 6800-13000ರವರೆಗೆ | ಮೇ 2011ರ ನಂತರ (ದಿ:1-6-2011 ರಿಂದ ದಿ:31-12-2011 ರವರೆಗೆ) |
| 2 | 7275-13350ರಿಂದ 28275-39900ರವರೆಗೆ | ಮೇ 2012ರ ನಂತರ (ದಿ:1-6-2012 ರಿಂದ ದಿ:31-12-2012 ರವರೆಗೆ) |

3. ಆದಾಗ್ಯೂ ಕಂಡಿಕೆ 2ರಲ್ಲಿ ತಿಳಿಸಿರುವುದು ಏನೇ ಇದ್ದಾಗ್ಯೂ ಈ ಬ್ಲಾಕ್ ಅವಧಿಯಲ್ಲಿ ಗಳಿಕೆ ರಜೆಯನ್ನು ಬಿಟ್ಟುಕೊಡುವ ಮತ್ತು ನಗದೀಕರಣ ಸೌಲಭ್ಯವನ್ನು ಪಡೆಯಲು ಅರ್ಹರಿದ್ದು, ಸದರಿ ಅವಧಿಯಲ್ಲಿ ನಿವೃತ್ತಿ ಹೊಂದುವ ಸರ್ಕಾರಿ ನೌಕರರು ಎರಡನೇ ಕಂಡಿಕೆಯ ಕೋಷ್ಟಕದಲ್ಲಿ ಅವರ ವೇತನ ಶ್ರೇಣಿಯ ಮುಂದೆ ಸೂಚಿಸಿರುವ

ಅವಧಿಯಲ್ಲಿ ಅಥವಾ ಅವರ ಸೇವೆಯ ಕೊನೆಯ ತಿಂಗಳಲ್ಲಿ ಇದರಲ್ಲಿ ಯಾವುದು ಮೊದಲೋ ಆ ತಿಂಗಳಲ್ಲಿ ನಗದೀಕರಣ ಪ್ರಯೋಜನ ಪಡೆಯಲು ಅರ್ಹರಾಗಿರುತ್ತಾರೆ.

4. ಗಳಿಕೆ ರಜೆಯನ್ನು ಅಧ್ಯರ್ಪಿಸಿ ನಗದೀಕರಣಕ್ಕಾಗಿ ನಿರ್ದಿಷ್ಟಪಡಿಸಿದ ಅವಧಿಯ ಪೂರ್ವದಲ್ಲಿ ಯಾವ ಸರ್ಕಾರಿ ನೌಕರನ ಗಳಿಕೆ ರಜೆಯ ಲೆಕ್ಕದಲ್ಲಿ ಗರಿಷ್ಟ ಮೊತ್ತದ 240 ದಿನಗಳು ಮೀರುತ್ತದೆಯೋ ಅಂತಹ ಪ್ರಕರಣಗಳಲ್ಲಿ ಮೇಲಿನ ಕಂಡಿಕೆ 2ರಲ್ಲಿನ ಕೋಷ್ಟಕದಲ್ಲಿ ನಮೂದಿಸಿರುವ ಅವಧಿಯ ಬದಲಾಗಿ, ಗರಿಷ್ಟ ಮೊತ್ತದ 240 ದಿನಗಳ ಗಳಿಕೆ ರಜೆ ಮೀರುವ ತಿಂಗಳಿನ ತಕ್ಷಣದ ಹಿಂದಿನ ತಿಂಗಳಿನಲ್ಲಿ ಗಳಿಕೆ ರಜೆಯನ್ನು ಅಧ್ಯರ್ಪಿಸಿ ನಗದೀಕರಿಸಲು ಅನುಮತಿಸಲಾಗಿದ್ದು, ಸಂಬಂಧಪಟ್ಟ ವರ್ಷದ ಬ್ಲಾಕ್ ಅವಧಿಯ ಜೂನ್ ತಿಂಗಳ ಅವಧಿಯಲ್ಲಿ (ನ್ಯಾಯಾಂಗ ಇಲಾಖೆಯ ಸಿಬ್ಬಂದಿ ವರ್ಗದವರಿಗೆ ಸಂಬಂಧಿಸಿದಂತೆ ಮೇ ತಿಂಗಳ ಕೊನೆಯಲ್ಲಿ) ಅಥವಾ ಡಿಸೆಂಬರ್ ತಿಂಗಳ ಕೊನೆಯಲ್ಲಿ ಅಂದರೆ ಜೂನ್ 2011, ಡಿಸೆಂಬರ್ 2011ರ ಕೊನೆಯಲ್ಲಿ ಪಡೆಯಲು ಅರ್ಹರಾಗಿರುತ್ತಾರೆ. ದಿ:31.05.2011ರಂದು ಅಥವಾ ಅದಕ್ಕೆ ಮೊದಲು ಅರ್ಜಿ ಸಲ್ಲಿಸಿರುವ ನ್ಯಾಯಾಂಗ ಇಲಾಖೆಯ ನೌಕರರ ಲೆಕ್ಕದಲ್ಲಿ ದಿ:01.06.2011ರಂದು 240 ದಿನಗಳಿಗಿಂತ ಹೆಚ್ಚು ಗಳಿಕೆ ರಜೆ ಮೀರುವ ಸಂದರ್ಭದಲ್ಲಿ ಮಾತ್ರ ಈ ಸೌಲಭ್ಯವನ್ನು ಪಡೆಯಲು ಅರ್ಹರಾಗಿರುತ್ತಾರೆ. ಆದರೆ ಈ ಅವಕಾಶದಿಂದಾಗಿ ಗಳಿಕೆ ರಜೆ ನಗದೀಕರಣ ಸೌಲಭ್ಯವು ಒಂದು ಬ್ಲಾಕ್ ಅವಧಿಗೆ ಸೀಮಿತಗೊಳಿಸಿರುವ 30 ದಿನಗಳ ಗರಿಷ್ಟ ಮಿತಿಯನ್ನು ಆಯಾ ಬ್ಲಾಕ್ ಅವಧಿಯಲ್ಲಿ ಯಾವುದೇ ಕಾರಣಕ್ಕೂ ಮೀರತಕ್ಕದಲ್ಲ. ಅಂದರೆ ಎರಡು ವರ್ಷಗಳ ಬ್ಲಾಕ್ ಅವಧಿಯಲ್ಲಿ ಒಮ್ಮೆ ಮಾತ್ರ ಗರಿಷ್ಟ 30 ದಿನಗಳ ಗಳಿಕೆ ರಜೆ ನಗದೀಕರಣ ಪಡೆಯಲು ಅವಕಾಶವಿರುತ್ತದೆ.

5. ಕರ್ನಾಟಕ ಸರ್ಕಾರಿ ಸೇವಾ ನಿಯಮಾವಳಿಗಳ ನಿಯಮ 118ರಲ್ಲಿ ನಿಯಮಿಸಿರುವಂತಹ ಗಳಿಕೆ ರಜೆ ನಗದೀಕರಣ ನಿಯಂತ್ರಣಕ್ಕೆ ಸಂಬಂಧಿಸಿದ ಇತರೇ ಷರತ್ತುಗಳು ಅನ್ವಯವಾಗುತ್ತದೆ.

6. ಈ ಆದೇಶವು ಸರ್ಕಾರದಿಂದ ಸಹಾಯಾನುದಾನ ಪಡೆಯುತ್ತಿರುವ ಸಂಸ್ಥೆಗಳ ನೌಕರರಿಗೂ ಅನ್ವಯಿಸುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ನಾರಾಯಣ) 13/12/10
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-1).

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 100 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

**ಇವರಿಗೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು/ಅಪರಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.

3. ಎಲ್ಲಾ ಇಲಾಖಾ ಮುಖ್ಯಾಧಿಕಾರಿಗಳು.
4. ಎಲ್ಲಾ ಜಿಲ್ಲಾಧಿಕಾರಿಗಳು.
5. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗ.
6. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
7. ಪ್ರಧಾನ ಮಹಾಲೇಖಪಾಲರು (ಸಿವಿಲ್ ಮತ್ತು ವಾಣಿಜ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
8. ಮಹಾಲೇಖಪಾಲರು (ಕಂದಾಯ ಸ್ವೀಕೃತಿ ಮತ್ತು ಕಾಮಗಾರಿಗಳು ಮತ್ತು ಅರಣ್ಯ ಲೆಕ್ಕಪರಿಶೋಧನೆ).
9. ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು
10. ರಿಜಿಸ್ಟ್ರಾರ್, ಕರ್ನಾಟಕ ಉಚ್ಚನ್ಯಾಯಾಲಯ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು,
12, ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
14, ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ವಿಧಾನ ಪರಿಷತ್ತು, ಬೆಂಗಳೂರು.
15. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು
16: ಪ್ರಾಜೆಕ್ಟ್ ಆಫೀಸರ್,ಹೆಚ್.ಆರ್.ಎಂ.ಎಸ್, ಕೊಠಡಿ ಸಂಖ್ಯೆ:145-A, ಬಹುಮಹಡಿಗಳ ಕಟ್ಟಡ, ಬೆಂಗಳೂರು
17. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
18. ಅಧ್ಯಕ್ಷರು,ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
19. ಕರ್ನಾಟಕ ಸರ್ಕಾರಿ ಸಚಿವಾಲಯ ಗ್ರಂಥಾಲಯ; ವಿಧಾನ ಮಂಡಲದ ಗ್ರಂಥಾಲಯ.
20. ವಾರಪತ್ರ/ಶಾಖೆಯ ರಕ್ಷಾ ಕಡತ.

[ಕ್ರಮ ಸಂಖ್ಯೆ:7 ರಿಂದ 14 ರವರೆಗೆ ನಮೂದಿತವಾದ ಅಧಿಕಾರಿಗಳಿಗೆ ಪತ್ರದ ಮೂಲಕ].

**ಕರ್ನಾಟಕ ಸರ್ಕಾರದ ಅಧಿಕೃತ ಅಂತರ್ಜಾಲ ತಾಣ www.finance.kar.nic.in ವೀಕ್ಷಿಸಿ.**